6-3-2015

24

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಂ.ಪಿ.ಸುಜಾ ಕುಶಾಲಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ, ಕೊಡಗು) ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಉತ್ತರ**

**ಸೂಚನೆ:-**

ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ "ಕೊಡಗು ವಿವಿಗೆ ವಿಲೀನ ಆತಂಕ" ಎನ್ನುವ ಶೀರ್ಷಿಕೆಯಲ್ಲಿ ಪ್ರಕಟವಾದ ಸುದ್ದಿಯಲ್ಲಿ ಶೈಕ್ಷಣಿಕ ಪ್ರಗತಿಗೆ ಹಿನ್ನಡೆಯ ಬೀತಿಯ ಕುರಿತು ವರದಿಯಾಗಿತ್ತು.

ಈ ಹಿಂದಿನ ಸರ್ಕಾರದ ಅವಧಿಯಲ್ಲಿ ರಾಜ್ಯದಲ್ಲಿ ರಚನೆಗೊಂಡ ವಿಶ್ವವಿದ್ಯಾಲಯಗಳ ಪೈಕಿ ಕೊಡಗು ಜಿಲ್ಲೆಯಲ್ಲಿಯೂ ಕೂಡ ವಿಶ್ವವಿದ್ಯಾಲಯ ರಚನೆಗೊಂಡು ಕಾರ್ಯಾರಂಭಗೊಂಡಿತ್ತು. ಆದರೆ ಕಳೆದ 2 ವರ್ಷಗಳಿಂದ ಅಭಿವೃದ್ಧಿಗೆ ಇದುವರೆಗೂ ಯಾವುದೇ ಅನುದಾನ ಈ ವಿಶ್ವವಿದ್ಯಾಲಯಕ್ಕೆ ನೀಡದ ಸರ್ಕಾರ ಇದರ ಅವನತಿಗೆ ಕಾರಣವಾಗುತ್ತಿದೆ. ಹಲವು ವರ್ಷಗಳ ಬೇಡಿಕೆ ಬಳಿಕ ಸ್ಥಾಪನೆಯಾಗಿ ಪ್ರಸ್ತುತ ಎಲ್ಲಾ ಸೌಲಭ್ಯಗಳೊಂದಿಗೆ ಉತ್ತಮವಾಗಿ ಮುನ್ನಡೆಯುತ್ತಿರುವ ಕೊಡಗು ವಿವಿ ವಿಲೀನಗೊಳಿಸಬಾರದೆಂಬ ಆಗ್ರಹ ವಿದ್ಯಾರ್ಥಿ ಸಮೂಹದಿಂದ ಕೇಳಿಬರುತ್ತಿದೆ. ಜಿಲ್ಲಾ ಕೇಂದ್ರ ಮಡಿಕೇರಿಯ ಎಡಕ್ಕೆ ಮಂಗಳೂರು ವಿವಿ ಹಾಗೂ ಬಲಕ್ಕೆ ಮೈಸೂರು ವಿವಿಗಳನ್ನು ಹೊಂದಿದ್ದರೂ ಕೂಡ ಕೊಡಗು ಜಿಲ್ಲೆಯಲ್ಲಿ ಉನ್ನತ ಶಿಕ್ಷಣ ಪಡೆಯುವವರ ಸಂಖ್ಯೆ ಶೇ.16 ಮಾತ್ರವಾಗಿತ್ತು. ಅಂದರೆ ಪದವಿ ಹಾಗೂ ಉನ್ನತ ಶಿಕ್ಷಣ ಪಡೆಯುವ ಹಂಬಲವುಳ್ಳ ಹೆಣ್ಣುಮಕ್ಕಳನ್ನು ಸುರಕ್ಷತೆಯ ದೃಷ್ಟಿಯಿಂದ ದೂರದ ನಗರಗಳಿಗೆ ಕಳಿಸಲು ಪೋಷಕರು ಹಿಂದೇಟು ಹಾಕುತ್ತಿರುವುದು, ಹಾಗೆಯೇ ಇತರ ಬಡ ವಿದ್ಯಾರ್ಥಿಗಳು, ಪ.ಜಾತಿ ಪಂಗಳ, ಶೈಕ್ಷಣಿಕ ಸಮಸ್ಯೆಗಳನ್ನು ಮನಗಂಡು ಜಿಲ್ಲೆಗೊಂದು ವಿವಿ ಪರಿಕಲ್ಪನೆಯಂತೆ ಕೊಡಗು ಜಿಲ್ಲೆಯಲ್ಲಿ ಸ್ಥಾಪಿಸಲಾದ ವಿವಿಯನ್ನು ವಿಲೀನಗೊಳಿಸದೆ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಮತ್ತು ಸುಗಮವಾಗಿ ನಡೆಸಲು ಸೂಕ್ತ ಅನುದಾನವನ್ನು ಒದಗಿಸುವಂತೆ ಮತ್ತು ಸದರಿ ವಿವಿಯನ್ನು ಮುಚ್ಚುವ ನಿರ್ಧಾರವನ್ನು ಕೈಬಿಡುವಂತೆ ಆಗ್ರಹಿಸಿ ಮಾನ್ಯ ಉನ್ನತ ಶಿಕ್ಷಣ ಸಚಿವರು ಮತ್ತು ಸರ್ಕಾರವನ್ನು ಒತ್ತಾಯಿಸುತ್ತೇನೆ.

**ಉತ್ತರ:-**

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ: ಇಡಿ/10/ಯುಡಿವಿ/2025**

**(ಡಾ.ಎಂ.ಸಿ.ಸುಧಾಕರ್)**
ಉನ್ನತ ಶಿಕ್ಷಣ ಇಲಾಖೆ